# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

**ದಿನಾಂಕ: 02.07.2022 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ರಂಗನಾಥ್ ಬಿ.ಆರ್ ನೋಡಲ್ ಅಧಿಕಾರಿ, ವಾರ್ಡ್70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ರಂಗನಾಥ್ ಬಿ.ಆರ್ | ನೋಡಲ್ ಅಧಿಕಾರಿ–ವಾರ್ಡ್ ನಂ.70 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 70 |
| 3 | ದಿವಾಕರ್ ಎಂ | ಕಂದಾಯ ವಸೂಲಿಗಾರರು– ವಾರ್ಡ್ 70 |
| 4 | ಕೆ ಪ್ರಭುದಾಸ್ | ಕಂದಾಯ ವಸೂಲಿಗಾರರು– ವಾರ್ಡ್ 70 |
| 5 | ತ್ರಿವೇಣಿ ಎನ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 6 | ಕನಲ್ ಕುಮಾರ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 70 |
| 7 | ಹೆಚ್. ನಾಗೇಂದ್ರ ರಾವ್ | ಕಂದಾಯ ವಸೂಲಿಗಾರರು– ವಾರ್ಡ್ 70 |
| 8 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು |

**–:ನಡಾವಳಿಯ ವರದಿ:–**

- ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದನೋಡಲ್ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತಕೋರಿದರು.

**ವಿಷಯ ಸಂಖ್ಯೆ: 1:–** ಸುವಿಧಾ ಕ್ಯಾಬೀನ್ ಅಳವಡಿಸುವ ಬಗ್ಗೆ

ಕಿರಿಯ ಆರೋಗ್ಯ ಪರಿವೀಕ್ಷಕರಾದ ತ್ರಿವೇಣಿ ರವರು ಮಾತನಾಡಿ, ವಾರ್ಡ್ 70ರ ವ್ಯಾಪ್ತಿಯಲ್ಲಿ ಪೌರಕಾರ್ಮಿಕರ ವಿಶ್ರಾಂತಿ & ಬಟ್ಟೆ ಬದಲಾಯಿಸಲು ಸುವಿಧಾ ಕ್ಯಾಬೀನ್ ಅಳವಡಿಸುವ ಬಗ್ಗೆ ಚರ್ಚಿಸಲಾಯಿತು.

ಅದರಂತೆ ಜಿ.ಕೆ.ಡಬ್ಲ್ಯೂ ಬಡಾವಣೆಯ ಉದ್ಯಾನವನದ ಬಳಿ ಅವಶ್ಯಕವಾದ ಸ್ಥಳಾವಕಾಶ ಇರುವುದರ ಬಗ್ಗೆ ಚರ್ಚಿಸಲಾಯಿತು. ಅದರಂತೆ ಅಲ್ಲಿಯೇ ಸುವಿಧಾ ಕ್ಯಾಬೀನ್ ಅಳವಡಿಸಲು ಸಭೆಯು ತೀರ್ಮಾನಿಸಿತು.

* **ವಿಷಯ ಸಂಖ್ಯೆ: 2**

**ವಾರ್ಡ್ ವ್ಯಾಪ್ತಿಯಲ್ಲಿ ಓವರ್ ಹ್ಯಾಂಗಿಂಗ್ ಕೇಬಲ್‌ಗಳನ್ನು ತೆರವುಗೊಳಿಸುವ ಬಗ್ಗೆ:**

ನೋಡಲ್ ಅಧಿಕಾರಿಗಳು ಮಾತನಾಡಿ, ವಾರ್ಡ್ 70ರ ವ್ಯಾಪ್ತಿಯಲ್ಲಿ ಓವರ್ ಹ್ಯಾಂಗಿಂಗ್ ಕೇಬಲ್‌ಗಳನ್ನು ತೆರವುಗೊಳಿಸುವ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ 70ರ ಸಹಾಯಕ ಅಭಿಯಂತರರು ಮಾತನಾಡಿ ಈಗಾಗಲೇ ಬೀದಿದೀಪಗಳ ನಿರ್ವಹಣೆಗೆ ಬಳಸಲಾಗುತ್ತಿರುವ ವಾಹನವನ್ನು ಬಳಸಿಕೊಂಡು ಓವರ್ ಹ್ಯಾಂಗಿಂಗ್ ಕೇಬಲ್‌ಗಳನ್ನು ತೆರವುಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

* **ವಿಷಯ ಸಂಖ್ಯೆ:3**

**ಪೌರಕಾರ್ಮಿಕರನ್ನು ನೇಮಿಸಿಕೊಳ್ಳುವ ಬಗ್ಗೆ:-**

ವಾರ್ಡ್ 70ರ, ಹಿರಿಯ ಆರೋಗ್ಯ ಸಹಾಯಕರಾದ ಶ್ರೀ ಕೆ.ಶಿವಲಿಂಗಯ್ಯರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಈ ಹಿಂದೆ ಕೆಲಸ ನಿರ್ವಹಿಸುತ್ತಿದ್ದ ಪೌರಕಾರ್ಮಿಕರು ವಯೋ ನಿವೃತ್ತಿ ಹೊಂದಿರುವುದರಿಂದ 38 ಪೌರಕಾರ್ಮಿಕರ ಕೊರತೆ ಇರುತ್ತದೆ. ಅವರ ಬದಲಿಗೆ ಬದಲಿ ಪೌರಕಾರ್ಮಿಕರನ್ನು ನೇಮಿಸಿಕೊಳ್ಳಬೇಕೆಂದು ಸಭೆಗೆ ತಿಳಿಸಿದರು.

ಇದಕ್ಕೆ ನೋಡಲ್ ಅಧಿಕಾರಿರವರು ಪ್ರತಿಕ್ರಿಯಿಸಿ ಪೌರಕಾರ್ಮಿಕರನ್ನು ನೇಮಿಸಿಕೊಳ್ಳುವ ಬಗ್ಗೆ ಎಸ್.ಡಬ್ಲ್ಯೂ.ಎಂ ಸೆಲ್ ಮುಖಾಂತರ ಮೇಲಧಿಕಾರಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸೂಚಿಸಿದರು.

**ವಿಷಯ ಸಂಖ್ಯೆ: 4:-BBMP SAHAYA APP:**

* ಅವೀಶ್ ಹೆಚ್ ಎಂ, ಸಹಾಯಕ ಅಭಿಯಂತರರು, ವಾರ್ಡ್ ನಂ.70 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.
* ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ಮಾತನಾಡಿ ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟ ದೂರುಗಳನ್ನು ಪರಿಹರಿಸಲಾಗಿದೆ ಹಾಗೂ ಯಾವುದೇ ಸಮಸ್ಯೆ ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.70ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅಭೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ 70, ರಾಜಗೋಪಾಲ ನಗರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ವಾರ್ಡ್ ಸಮಿತಿ ಅಧ್ಯಕ್ಷರು**
**ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ**
**ವಾರ್ಡ್ ನಂ.70, ರಾಜಗೋಪಾಲ ನಗರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ